ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 26/02/2020

# ಬಿಜೆಪಿ ಆಡಳಿತದ ಬಿಹಾರ ವಿಧಾನಸಭೇಲಿ ಎನ್‌ಆರ್‌ಸಿ ವಿರುದ್ಧ ನಿರ್ಣಯ

ಪಟನಾ: ದೇಶಾದ್ಯಂತ ಎನ್‌ಆರ್‌ಸಿ ಜಾರಿಯ ಯಾವುದೇ ಪ್ರಸ್ತಾಪ ಸದ್ಯಕ್ಕೆ ತನ್ನ ಮುಂದಿಲ್ಲ ಎಂಬ ಕೇಂದ್ರ ಸರ್ಕಾರದ ಸ್ಪಷ್ಟ ಭರವಸೆ ಹೊರತಾಗಿಯೂ, ಜೆಡಿಯು ಜೊತೆ ಬಿಜೆಪಿ ಅಧಿಕಾರ ಹಂಚಿಕೊಂಡಿರುವ ಬಿಹಾರದಲ್ಲಿ ರಾಷ್ಟ್ರೀಯ ನಾಗರಿಕ ನೋಂದಣಿ (ಎನ್‌ಆರ್‌ಸಿ)ಯನ್ನು ಜಾರಿಗೊಳಿಸದೇ ಇರುವ ಗೊತ್ತುವಳಿಯನ್ನು ಅಂಗೀಕರಿಸಲಾಗಿದೆ. ಬಿಹಾರ ವಿಧಾನಸಭೆಯಲ್ಲಿ ಸ್ಪೀಕರ್ ವಿಜಯ್ ಚೌಧರಿ ಅವರು ಮಂಡಿಸಿದ ಗೊತ್ತುವಳಿಯನ್ನು ಸರ್ವಾನುಮತದಿಂದ ಅಂಗೀಕರಿಸಲಾಗಿದೆ. ಅಲ್ಲದೇ ರಾಷ್ಟ್ರೀಯ ಜನಸಂಖ್ಯಾ ನೋಂದಣಿ (ಎನ್‌ಪಿಆರ್)ಯನ್ನು ತಿದ್ದುಪಡಿಯೊಂದಿಗೆ 2010ರ ರೂಪದಲ್ಲಿ ಜಾರಿಗೊಳಿಸಬೇಕು ಎಂಬ ನಿರ್ಣಯವನ್ನು ಕೈಗೊಳ್ಳಲಾಗಿದೆ. ಈ ಮುನ್ನ ಕಾಂಗ್ರೆಸ್ ಹಾಗೂ ಬಿಜೆಪಿಯೇತರ ಸರ್ಕಾರಗಳು ಅಸ್ತಿತ್ವದಲ್ಲಿ ಇರುವ ರಾಜ್ಯಗಳಲ್ಲಿ ಗೊತ್ತುವಳಿ ಅಂಗೀಕರಿಸಲಾಗಿತ್ತು.